ಶಿಕ್ಷಕರ ವರ್ಗಾವಣೆ

1406(2346), ಶ್ರೀ ಐಹೊಳೆ ಡಿ.ಮಹಾಲಿಂಗಪ್ಪ(ರಾಯಬಾಗ)

ಅ) ಶಿಕ್ಷಕರ ವರ್ಗಾವಣೆಯಿಂದ ತೆರವಾದ ಸ್ಥಳಕ್ಕೆ ಬದಲಿ ಶಿಕ್ಷಕರನ್ನು ವರ್ಗ ಮಾಡದಿರುವುದರಿಂದ ಶಾಲಾ ಮಕ್ಕಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ತೊಂದರೆಯನ್ನು ನಿವಾರಿಸಲು ಸರ್ಕಾರ ತೆಗೆದುಕೊಂಡ ತುರ್ತು ಕ್ರಮಗಳೇನು;

ಇ) ವರ್ಗಾವಣೆಗೊಂಡ ಶಿಕ್ಷಕರ ಸ್ಥಳಕ್ಕೆ ಬದಲಿ ಶಿಕ್ಷಕರು ಕರ್ತವ್ಯಕ್ಕೆ ಹಾಜರಾಗುವವರೆಗೂ ವರ್ಗಾವಣೆಗೊಂಡ ಶಿಕ್ಷಕರನ್ನು ಬಿಡುಗಡೆಗೊಳಿಸದಿರಲು ಸರ್ಕಾರ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವುದೇ?

ಶ್ರೀ ಕಿಮ್ಮನೆ ರತ್ನಾಕರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಶಿಕ್ಷಕರ ವರ್ಗಾವಣೆಯಿಂದ ತೆರವಾದ ಸ್ಥಳಕ್ಕೆ ಬದಲಿ ಶಿಕ್ಷಕರನ್ನು ತುಂಬಲು ವರ್ಗಾವಣೆ ಕೌನ್ಸೆಲ್ಲಿಂಗ್‌ನಲ್ಲಿ ಖಾಲಿ ಹುದ್ದೆಯನ್ನು ತೋರಿಸಲಾಗುವುದು. ಅವಶ್ಯಕತೆ ಇರುವ ಶಿಕ್ಷಕರು ಸದರಿ ಖಾಲಿ ಹುದ್ದೆಯನ್ನು ಆಯ್ಕೆ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ.

ಆ) ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು ಖಾಯಂ ಆಗಿ ಭರ್ತಿ ಮಾಡಲು ಶಿಕ್ಷಕರ ಅರ್ಹತಾ ಪರೀಕ್ಷೆಯನ್ನು (TET) ನಡೆಸಲಾಗಿದೆ. ಆದಾಗ್ಯೂ, ಶೈಕ್ಷಣಿಕ ಕಾರ್ಯಕ್ರಮಗಳಿಗೆ ಅಡಚಣೆ ಆಗಬಾರದೆನ್ನುವ ದೃಷ್ಟಿಯಿಂದ ನೇಮಾತಿ ಮಾಡುವವರೆಗೆ ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ 9,405 ಮತ್ತು ಸರ್ಕಾರಿ ಪ್ರೌಢ ಶಾಲೆಗಳಿಗೆ 1,137 ಅತಿಥಿ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲು ಸರ್ಕಾರದ ಆದೇಶ ಸಂಖ್ಯೆ: ಇಡಿ194 ಎಸ್‌ಟಿಬಿ 2013; ದಿನಾಂಕ:13/06/2014 ರಲ್ಲಿ ಅನುಮತಿ

ನೀಡಲಾಗಿರುತ್ತದೆ ಹಾಗೂ ಜೂನ್–2014 ರ ನಂತರ ನಿವೃತ್ತರಾಗಲಿರುವ ಪ್ರಾಥಮಿಕ ಹಾಗೂ ಪ್ರೌಢ ಶಾಲಾ ಶಿಕ್ಷಕರನ್ನು ಖಾಲಿ ಹುದ್ದೆಗಳನ್ನು ಭರ್ತಿ ಮಾಡುವವರೆಗೆ ಸೇವೆಯಲ್ಲಿ ಮುಂದುವರೆಸಲು ಆದೇಶ ಹೊರಡಿಸಿದೆ.

ಇ) ಕ್ರಮ ಕೈಗೊಳ್ಳಲಾಗುವುದು.

ಅಂಗನವಾಡಿ ಕೇಂದ್ರಗಳ ಕಟ್ಟಡಗಳ ಕೊರತೆ

1408(1389), ಶ್ರೀ ಆನಂದ ಸಿಂಗ್(ವಿಜಯನಗರ–ಬಳ್ಳಾರಿ)

ಅ) ಹೊಸಪೇಟೆ ತಾಲ್ಲೂಕಿನ ವಿಜಯನಗರ ಮತಕ್ಷೇತ್ರ ವ್ಯಾಪ್ತಿಯಲ್ಲಿರುವ ಒಟ್ಟು ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು; ಆ ಪೈಕಿ ಸ್ವಂತ ಮತ್ತು ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿಗಳ ಸಂಖ್ಯೆ ಎಷ್ಟು; (ಗ್ರಾಮ ಹಾಗೂ ವಾರ್ಡ್‌ವಾರು ವಿವರ ನೀಡುವುದು);

ಆ) ಸ್ವಂತ ಕಟ್ಟಡ ಇಲ್ಲದೆ ಅಂಗನವಾಡಿ ಕೇಂದ್ರಗಳಿಗೆ ಸ್ವಂತ ಕಟ್ಟಡ ಕಲ್ಪಿಸುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಇ) ಅಂಗನವಾಡಿ ಕೇಂದ್ರಗಳಲ್ಲಿನ ಮಕ್ಕಳನ್ನು ಉತ್ತಮ ಪರಿಸರಲ್ಲಿ ಬೆಳೆಸಬೇಕೆಂಬ ನಿಯಮವಿದ್ದರೂ ಸಹ ಆ ಕುರಿತಾದ ಕ್ರಮಗಳನ್ನು ಅನುಷ್ಠಾನ ಮಾಡದೇ ಇರಲು ಕಾರಣಗಳೇನು;

ಈ) ಅಪೌಷ್ಟಿಕತೆಯ ನಿವಾರಣೆಗಾಗಿ ಸುಸಜ್ಜಿತ ಅಂಗನವಾಡಿ ಕೇಂದ್ರಗಳನ್ನು ಸ್ಥಾಪಿಸುವ ದೃಷ್ಟಿಯಿಂದ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಉ) ಹೊಸದಾಗಿ ಪ್ರಾರಂಭಿಸಲು ಉದ್ದೇಶಿಸಿರುವ ಅಂಗನವಾಡಿ ಕೇಂದ್ರಗಳಿಗೆ ಮೂಲಭೂತ ಸೌಕರ್ಯ ಕಲ್ಪಿಸಲಾಗಿದೆಯೇ; (ವಿವರ ನೀಡುವುದು)?